# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಎಂ ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 483(525) |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 11-07-2023. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಜವಳಿ ಮತ್ತು ಉಡುಪಿನ ಕ್ಷೇತ್ರವನ್ನು ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಪ್ರಬಲ ಅಸ್ತಿತ್ವವನ್ನು ಕಾಪಾಡಿಕೊಳ್ಳುವುದು ಸೇರಿದಂತೆ ರಾಜ್ಯದ ಸುಸ್ಥಿರ ಉದ್ಯೋಗಾವಕಾಶ ಮತ್ತು ಆರ್ಥಿಕ ಬೆಳವಣಿಗೆಗಾಗಿ ರಾಜ್ಯ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ; | ರಾಜ್ಯದಲ್ಲಿ ಜವಳಿ ಮತ್ತು ಉಡುಪಿನ ಕ್ಷೇತ್ರವನ್ನು ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಪ್ರಬಲ ಅಸ್ತಿತ್ವವನ್ನು ಕಾಪಾಡಿಕೊಳ್ಳುವುದು ಸೇರಿದಂತೆ ರಾಜ್ಯದ ಸುಸ್ಥಿರ ಉದ್ಯೋಗಾವಕಾಶ ಮತ್ತು ಆರ್ಥಿಕ ಬೆಳವಣಿಗೆಗಾಗಿ ರಾಜ್ಯ ಸರ್ಕಾರವು ದಿನಾಂಕ:04.11.2019 ರಂದು ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019-24ನ್ನು ಜಾರಿಗೊಳಿಸಲಾಗಿರುತ್ತದೆ.<br><br>ಇತ್ತೀಚಿನ ಕೋವಿಡ್-19ರ ಸಾಂಕ್ರಾಮಿಕ ಪಿಡುಗಿನಿಂದ ಎದುರಾದ ಆರ್ಥಿಕ ಸವಾಲನ್ನು ಸಮರ್ಪಕವಾಗಿ ಎದುರಿಸಲು ಹಾಗೂ ಜಾಗತಿಕ ಆರ್ಥಿಕ ಹಿಂಜರಿಕೆಯ ಪರಿಸ್ಥಿತಿಯ ಸಮತೋಲನ ಕಾಯ್ದು ಕೊಳ್ಳಲು ಸರ್ಕಾರವು ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019-24 ಅನ್ನು ಮತ್ತಷ್ಟು ಉದ್ಯಮ ಸ್ನೇಹಿಯನ್ನಾಗಿಸಲು ಕೆಲವು ತಿದ್ದುಪಡಿಗಳನ್ನು ಮಾಡಿ ದಿನಾಂಕ:02.08.2022ರಲ್ಲಿ ಸದರಿ ನೀತಿಯನ್ನು ಪರಿಷ್ಕರಿಸಲಾಗಿದೆ. ವಿವರವನ್ನು **ಅನುಬಂಧದಲ್ಲಿ** ಒದಗಿಸಿದೆ. |
| (ಆ) | ಬಂಡವಾಳ ಹೂಡಿಕೆ, ತಂತ್ರಜ್ಞಾನ ವರ್ಗಾವಣೆ, ಕೌಶಲ್ಯ ಉನ್ನತೀಕರಣ ಮತ್ತು ಸಹಾಯ ಹಸ್ತದ ಮೂಲಕ ರಾಜ್ಯದಲ್ಲಿ ಜವಳಿ ಕೈಗಾರಿಕೆಯ ಮೌಲ್ಯ ಸರಣಿಯನ್ನು ಭದ್ರಗೊಳಿಸಲು ರಾಜ್ಯ ಸರ್ಕಾರವು ಏನು ಕ್ರಮಕೈಗೊಂಡಿದೆ? | • ಮೇಲೆ ತಿಳಿಸಿರುವಂತೆ ಸರ್ಕಾರವು ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019-24 ಅನ್ನು ಮತ್ತಷ್ಟು ಉದ್ಯಮ ಸ್ನೇಹಿಯನ್ನಾಗಿಸಲು ಕೆಲವು ಪರಿಷ್ಕರಣೆ ಮಾಡಲಾಗಿರುತ್ತದೆ.<br>• ದಿನಾಂಕ:18.08.2022 ರಲ್ಲಿ ಜವಳಿ/ ಸಿದ್ಧ ಉಡುಪು ಉದ್ದಿಮೆದಾರರ ಸಮಾವೇಶ ಹಾಗೂ ನವೆಂಬರ್ 02-04 ರವರೆಗೆ ಆಯೋಜಿಸಲಾಗಿದ್ದ Global Investors Meet - 2022 ರಲ್ಲಿ ರಾಜ್ಯದಲ್ಲಿನ ಜವಳಿ/ ಸಿದ್ಧ ಉಡುಪು ವಲಯದಲ್ಲಿ ಬಂಡವಾಳ ಹೂಡಿಕೆಗೆ ಇರುವ ಅವಕಾಶಗಳ ಕುರಿತು ಉದ್ದಿಮೆದಾರರೊಂದಿಗೆ ಸಂವಾದವನ್ನು ಆಯೋಜಿಸಲಾಗಿತ್ತು.<br>• 2023 ರ ಫೆಬ್ರವರಿ 23 ರಿಂದ 24 ರವರೆಗೆ ಮುಂಬೈನಲ್ಲಿ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಮಟ್ಟದ ತಾಂತ್ರಿಕ ಜವಳಿ ಸಮಾವೇಶ Technotex-2023 ರಲ್ಲಿ ರಾಜ್ಯ ಸರ್ಕಾರವು ಪಾಲುದಾರ ರಾಜ್ಯವಾಗಿ ಭಾಗವಹಿಸಿ ಕರ್ನಾಟಕದಲ್ಲಿ ತಾಂತ್ರಿಕ ಜವಳಿ ವಲಯದಲ್ಲಿ ಬಂಡವಾಳ ಹೂಡಿಕೆಗೆ ಇರುವ ಅವಕಾಶಗಳ ಕುರಿತು ಉದ್ದಿಮೆದಾರರಿಗೆ ಪ್ರಚುರ ಪಡಿಸಲಾಯಿತು. |

| | | |
|---|---|---|
| | | • 2023ನೇ ಜೂನ್ 20 ರಂದು ನವದೆಹಲಿಯ ವಾಣಿಜ್ಯ ಭವನದಲ್ಲಿ PM-MITRA park ಕಲಬುರಗಿ ಹಾಗೂ ರಾಜ್ಯದಲ್ಲಿ ಬಂಡವಾಳ ಹೂಡಿಕೆಗೆ ಇರುವ ಅವಕಾಶಗಳ ಕುರಿತು ದೇಶದಲ್ಲಿನ ಪ್ರಖ್ಯಾತ ಜವಳಿ ಉದ್ದಿಮೆದಾರರಿಗೆ ಪ್ರಚುರ ಪಡಿಸಲಾಯಿತು.<br><br>ಈ ರೀತಿಯಾಗಿ ಕೈಮಗ್ಗ ಮತ್ತು ಜವಳಿ ಇಲಾಖೆಯು ರಾಜ್ಯದಲ್ಲಿ ಜವಳಿ ಮತ್ತು ಸಿದ್ಧ ಉಡುಪು ವಲಯದಲ್ಲಿ ಬಂಡವಾಳ ಹೂಡಿಕೆ, ತಂತ್ರಜ್ಞಾನ ವರ್ಗಾವಣೆಗೆ ಜವಳಿ ನೀತಿಯಡಿ ಅರ್ಹ ಪ್ರೋತ್ಸಾಹಧನ ಮತ್ತು ರಿಯಾಯಿತಿಗಳನ್ನು ನೀಡುವುದರ ಮೂಲಕ ರಾಜ್ಯದಲ್ಲಿನ ಜವಳಿ ಕೈಗಾರಿಕೆಯ ಮೌಲ್ಯ ಸರಣಿಯನ್ನು ಭದ್ರಗೊಳಿಸಲು ಕ್ರಮವಹಿಸುತ್ತಿದೆ. |

ಸಂಖ್ಯೆ: CI 82 JAKE 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

# ಅನುಬಂಧ

**ದಿನಾಂಕ:02.08.2022 ರಂದು ನೂತನ ಜವಳ ಹಾಗೂ ಸಿದ್ಧ ಉಡುಪು ನೀತಿ 2019-24 ಕೆಳಕಂಡಂತೆ ತಿದ್ದುಪಡಿ ಮಾಡಲಾಗಿರುತ್ತದೆ.**

1. ಶೇ.5 ರ ಬಡ್ಡಿ ದರದಲ್ಲಿ ಬಡ್ಡಿ ಸಹಾಯಧನ ಯೋಜನೆಯನ್ನು ಬೃಹತ್ ಕೈಗಾರಿಕೆಗಳ ಜೊತೆಗೆ ಮಧ್ಯಮ ಕೈಗಾರಿಕೆಗಳಿಗೂ ವಿಸ್ತರಣೆ.
2. ಜವಳಿ ಹಾಗೂ ಸಿದ್ಧ ಉಡುಪು ಘಟಕಗಳಿಗೆ ನೀಡುವ ರಿಯಾಯಿತಿ ಮತ್ತು ಪ್ರೋತ್ಸಾಹಕಗಳ ಮೇಲಿನ ಮಿತಿಯನ್ನು ಶೇ. 100 ರವರೆಗೆ ವಿಸ್ತರಣೆ.
3. ಜವಳಿ ಪಾರ್ಕ್ ಮೂಲಭೂತ ಸೌಕರ್ಯಗಳಿಗಾಗಿ ಪ್ರತ್ಯೇಕ ಉದ್ಯಮಿಗೆ ಎಸ್.ಪಿ.ವಿ. ಮಾದರಿಯಲ್ಲಿರುವ ಯೋಜನಾ ಮೊತ್ತದ ಮೇಲೆ ಶೇ.40% ಅಥವಾ ರೂ.40.00 ಕೋಟಿ ಇವುಗಳಲ್ಲಿ ಯಾವುದು ಕಡಿಮೆಯೋ ಅದನ್ನು ಒದಗಿಸುವುದು.
4. ವೇತನ ಸಹಾಯಧನ ಹೆಚ್ಚಳ ಕುರಿತು ರಾಜ್ಯ ಸರ್ಕಾರವು ಕಲ್ಯಾಣ ಕರ್ನಾಟಕ ಭಾಗದಲ್ಲಿನ ಸಿದ್ಧ ಉಡುಪು ಘಟಕಗಳಿಗೆ ರೂ.1,500/-ಗಳಿಂದ ರೂ.3,000/-ಗಳಿಗೆ ಹೆಚ್ಚಿಸಲಾಗಿದೆ. ಅದೇ ರೀತಿ ಇತರೆ ಕರ್ನಾಟಕ ಭಾಗದಲ್ಲಿ ಈ ಸಹಾಯಧನವನ್ನು ರೂ.1,000/-ಗಳಿಂದ ರೂ.2,000/-ಗಳಿಗೆ ಹೆಚ್ಚಿಸಲಾಗಿದೆ.

**ಜಂಟಿ ನಿರ್ದೇಶಕರು (ಜವಳಿ ನೀತಿ)**
**ಕೈಮಗ್ಗ ಮತ್ತು ಜವಳಿ ಇಲಾಖೆ,**
**ಕೇಂದ್ರ ಕಚೇರಿ, ಬೆಂಗಳೂರು**

**0000000**